# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

**ಶುಕ್ರವಾರ, ದಿನಾಂಕ: 16ನೇ ಜೂನ್, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ಪ್ರಶ್ನೋತ್ತರ

| | | | |
|---|---|---|---|
| ಅ. | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಇಪ್ಪತ್ತಮೂರನೆಯ ಪಟ್ಟಿ |
| ಆ. | **ತಡೆಹಿಡಿಯಲಾದ ಪ್ರಶ್ನೆ:** | | |
| | ಹದಿನೇಳನೆಯ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀಮತಿ ಮೋಟಮ್ಮ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 260(2563) | : | **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** |
| ಇ. | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಇಪ್ಪತ್ತಮೂರನೆಯ ಪಟ್ಟಿ |

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು:-

1) **ಕರ್ನಾಟಕ ಮಾರಾಟಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2017**
2) **ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕ, 2017**

### 03. ವರದಿಯನ್ನೊಪ್ಪಿಸುವುದು

**ಶ್ರೀ ರಾಮಚಂದ್ರಗೌಡ** (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿ) ಅವರು ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ 132ನೇ ವರದಿಯನ್ನು ಒಪ್ಪಿಸುವುದು.

## 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**01. ಕರ್ನಾಟಕ ಮಾರಾಟಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2017**

**ಶ್ರೀ ಸಿದ್ದರಾಮಯ್ಯ** (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ ಕರ್ನಾಟಕ ಮಾರಾಟಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**02. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕ, 2017**

**ಶ್ರೀ ಸಿದ್ದರಾಮಯ್ಯ** (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಮಕ್ಕಳ ಹಕ್ಕುಗಳ ರಕ್ಷಣೆ ಬಗ್ಗೆ ವಿಶೇಷ ಚರ್ಚೆ

**ಶ್ರೀಮತಿ ಮೋಟಮ್ಮ, ಶ್ರೀಮತಿ ತಾರಾ ಅನೂರಾಧ ಹಾಗೂ ಶ್ರೀ ಬಸವರಾಜ ಹೊರಟ್ಟಿ** ಅವರುಗಳಿಂದ ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

## 06. ಸದಸ್ಯರ ಖಾಸಗಿ ಕಾರ್ಯಕಲಾಪಗಳು

### ಸದಸ್ಯರ ಖಾಸಗಿ ವಿಧೇಯಕದ ಮಂಡನೆ

**"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ", 2016:-**

**ಶ್ರೀ ಬಸವರಾಜ ಹೊರಟ್ಟಿ** (ವಿಧಾನ ಪರಿಷತ್ತಿನ ಮಾನ್ಯ ಸದಸ್ಯರು) ಅವರು:-

ಅ) 2016ನೇ ಸಾಲಿನ **"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ"**ವನ್ನು ಮಂಡಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**